**ಸಾಕ್ಷಿಯನ್ನು ದಿಃ 06.03.2025 ರಂದು ಕರೆಯಿಸಿ ಪ್ರಮಾಣ ವಚನ ಬೋದಿಸಲಾಯಿತು.**

**ಮುಖ್ಯ ವಿಚಾರಣೆಃ ಅರ್ಜಿದಾರರ ಪರ ವಕೀಲರಿಂದಃ**

ಈ ದಿನ ನಾನು ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ನಮೂದಿಸಿರುವ ಎಲ್ಲಾ ವಿಷಯಗಳು ಸರಿಯಾಗಿ ಮತ್ತು ಸತ್ಯವಾಗಿರುತ್ತವೆ. ಅದಕ್ಕೆ ನನ್ನ ಸಹಿ ಇರುತ್ತದೆ.

ಪ್ರಥಮ ವರ್ತಮಾನ ವರದಿಯ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 1 ಎಂದು, ದೂರಿನ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 2 ಎಂದು, ಸ್ಥಳ ಪಂಚನಾಮೆಯ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 3 ಎಂದು, ಗಾಯದ ಪ್ರಮಾಣ ಪತ್ರದ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 4 ಎಂದು, ಐಎಂವಿ ವರದಿಯ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ.5 ಎಂದು, ಅಂತಿಮ ದೋಷಾರೋಪಣಾ ಪಟ್ಟಿಯ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 6 ಎಂದು, ಒಂದು ಡಿಸ್ಚಾರ್ಜ್ ಸಮ್ಮರಿಯನ್ನು ಹಾಜರುಪಡಿಸಿದ್ದು, ನಿಪಿ. 7 ಎಂದು, 29 ಔಷಧಿ ಪಾವತಿ ರಸೀದಿಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ಒಟ್ಟಾಗಿ ನಿಪಿ. 8 ಎಂದು, 24 ಸಲಹಾ ಚೀಟಿಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ಒಟ್ಟಾಗಿ ನಿಪಿ. 9 ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಮುಂದುವರೆದ ಮುಖ್ಯ ವಿಚಾರಣೆಗೆ ಸಮಯಾವಕಾಶವನ್ನು ಕೋರಿದ್ದು, ನೀಡಲಾಯಿತು)

(ನನ್ನ ಹೇಳಿಕೆಯಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ.

ಸಹಿ/-

ಹೆಚ್ಚುವರಿ ಲಘು ವ್ಯವಹಾರಗಳ ನ್ಯಾಯಾಧೀಶರು

ಮತ್ತು ಎಂ.ಎ.ಸಿ.ಟಿ., ಮೈಸೂರು.